**ದಿನಾಂಕ 27.11.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಮಾನ್ಯ ವಕೀಲರಿಂದ.**

ನನ್ನ ಮುಖ್ಯ ವಿಚಾರಣಾ ಸಾಕ್ಷ್ಯವನ್ನು ಪ್ರಮಾಣ ಪತ್ರದ ರೂಪದಲ್ಲಿ ಸಲ್ಲಿಸಿದ್ದೇನೆ. ಅದರಲ್ಲಿರುವ ವಿಚಾರಗಳನ್ನು ನಾನೇ ಹೇಳಿ ಬರೆಯಿಸಿ ರುಜು ಮಾಡಿದ್ದು ಅದರಲ್ಲಿರುವ ವಿಚಾರಗಳು ಸತ್ಯವಾಗಿವೆ.

ಅಧಿಕಾರ ಪತ್ರವನ್ನು **ನಿಪಿ 14** ಎಂದು, ಗುರುತಿನ ಚೀಟಿಯ ನೋಟರಿ ಪ್ರತಿಯನ್ನು ದೃಢೀಕೃತ ಪ್ರತಿಯನ್ನು **ನಿಪಿ 15** ಎಂದು, ನೇಮಕಾತಿ ಆದೇಶದ ಧೃಡಿಕೃತ ಪ್ರತಿಯನ್ನು **ನಿಪಿ 16** ಎಂದು, ಹಾಜರಾತಿ ಪುಸ್ತಕದ ದೃಢೀಕೃತ ಪ್ರತಿಯನ್ನು **ನಿಪಿ 17** ಎಂದು, ವೇತನ ಪಟ್ಟಿಗಳ ದೃಢೀಕೃತ ಪ್ರತಿಗಳನ್ನು ಒಟ್ಟಾಗಿ **ನಿಪಿ 18** ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ 2ನೇ ಎದುರುದಾರರ ಪರ ಮಾನ್ಯ ವಕೀಲರಿಂದ.**

ನಾನು 2020 ರಿಂದ ಪೆರಿಗ್ರಿನ್ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದೇನೆ. ವೇತನವನ್ನು ಅಕೌಂಟ್ ವಿಭಾಗದ ಅಧಿಕಾರಿ ನೀಡುತ್ತಾರೆ. ನಾವು ಹಾಜರಾತಿ ಪಡೆದುಕೊಳ್ಳುತ್ತೇವೆ. ಮೃತರಿಗೆ ಕಡಿತದ ನಂತರ ರೂ.17,000/- ಸಂಬಳ ಬರುತ್ತಿರಲಿಲ್ಲ ಎಂದರೆ ಸರಿಯಲ್ಲ. ಮೃತರಿಗೆ ಒಟ್ಟು ರೂ.19,000/- ಸಂಬಳ ಬರುತ್ತಿತ್ತು ಎಂದು ತೋರಿಸಲು ದಾಖಲಾತಿ ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ಮೃತರಿಗೆ ಒಟ್ಟು ವೇತನ ರೂ.14,000/- ಎಂದು ನಿಪಿ 18 ರಲ್ಲಿ ನಮೂದು ಇದೆ ಎಂದರೆ ಸರಿ. ಸಾಕ್ಷಿಯು ಮುಂದುವರೆದು ಅದು 20 ದಿನಗಳ ಕೆಲಸಕ್ಕೆ ಸಂಬಂಧಿಸಿದಂತೆ ಆಗಿರುತ್ತದೆ ಎಂದು ನುಡಿಯುತ್ತಾರೆ. ಮೃತರ ಕುಟುಂಬಕ್ಕೆ ಇ.ಎಸ್.ಐ ವತಿಯಿಂದ ಬರುವ ಹಣವನ್ನು ನೀಡಿರುತ್ತೇವೆ. ಮೃತರ ಕುಟುಂಬಕ್ಕೆ ಎಲ್ಲಾ ಸೌಲಭ್ಯಗಳನ್ನು ಪರಿಹಾರದ ರೂಪದಲ್ಲಿ ನೀಡಲಾಗಿದೆ ಎಂದರೆ ಸಾಕ್ಷಿಯು ಕೇವಲ ಇ.ಎಸ್.ಐ ಹಣ ನೀಡಲಾಗಿರುತ್ತದೆ ಎಂದು ನುಡಿಯುತ್ತಾರೆ. ಅಪಘಾತದ ಬಗ್ಗೆ ನನಗೆ ವಯಕ್ತಿಕ ಮಾಹಿತಿ ಇಲ್ಲ. ಮೃತರಿಗೆ ನಾನು ಹೇಳುವಷ್ಟು ಸಂಬಳ

ಬರುತ್ತಿರಲಿಲ್ಲ ಎಂದರೆ ಸರಿಯಲ್ಲ. ಅರ್ಜಿದಾರರಿಗೆ ಸಹಾಯ ಮಾಡುವ ಉದ್ದೇಶದಿಂದ ದಾಖಲಾತಿಗಳನ್ನು ಸೃಷ್ಟಿಸಿ ಹಾಜರುಪಡಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

1ನೇ ಎದುರುದಾರರ ಪರ ಮಾನ್ಯ ವಕೀಲರು ಗೈರು ಹಾಜರಾದ ಕಾರಣ ಪಾಟೀ ಸವಾಲು ಏನೂ ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**
**(ಓ.ಹೇ.ಕೇ.ಸ.ಇ.)**

**1ನೇ ಎಸ್‌ಸಿಜೆ ಮತ್ತು ಎಸಿಜೆಎಮ್**

**ಬೆಂಗಳೂರು**